2,080 ಮೆ.ವ್ಯಾ.ಗಷ್ಟು ವಿದ್ಯುತ್ ಉತ್ಪಾದನಾ ಸಾಮರ್ಥ್ಯವನ್ನು ರಾಜ್ಯದ ಗ್ರಿಡ್‌ಗೆ ಸೇರ್ಪಡೆಗೊಳಿಸುವ ಗುರಿಯನ್ನು ಹೊಂದ ಲಾಗಿದೆ.

- ರಾಜ್ಯದ ವಿದ್ಯುತ್ ಕೊರತೆಯನ್ನು ಸಂಪೂರ್ಣವಾಗಿ ನೀಗಿಸುವ ನಿಟ್ಟಿನಲ್ಲಿ ಹಲವಾರು ಹೊಸ ವಿದ್ಯುತ್ ಉತ್ಪಾದನಾ ಯೋಜನೆ ಗಳನ್ನು ನಿರ್ಮಿಸಲು ಉದ್ದೇಶಿಸಿದ್ದು, 2013–14 ರಿಂದ 2021–22ರ ಸಾಲುಗಳ ಅವಧಿಯಲ್ಲಿ ನಿರ್ಮಿಸಲು ಉದ್ದೇಶಿಸಿರುವ ಹೊಸ ಯೋಜನೆಗಳಿಂದ, ಕೇಂದ್ರ ವಿದ್ಯುತ್ ಉತ್ಪಾದನಾ ಘಟಕಗಳಿಂದ ರಾಜ್ಯದ ಪಾಲೂ ಸೇರಿದಂತೆ ಒಟ್ಟು 16,103 ಮೆ.ವ್ಯಾ.ಗಷ್ಟು ಹೆಚ್ಚುವರಿ ವಿದ್ಯುತ್ ಉತ್ಪಾದನಾ ಸಾಮರ್ಥ್ಯವು ರಾಜ್ಯದ ಗ್ರಿಡ್‌ಗೆ ಸೇರ್ಪಡೆಗೊಳ್ಳುವ ನಿರೀಕ್ಷೆ ಇದೆ.

ವಿದ್ಯುತ್ ಟ್ರಾನ್ಸ್ ಫಾರ್ಮರ್‌ಗಳ ಕೊರತೆ

48 (308) ಶ್ರೀ ಅಮರೇಶ್ (ಮುಳಬಾಗಿಲು) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ 3 ವರ್ಷಗಳಿಂದ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಗಳ ಕೊರತೆಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಟ್ರಾನ್ಸ್‌ಫಾರ್ಮರ್‌ಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? ಪೂರ್ಣ ಮಾಹಿತಿ ನೀಡುವುದು;

ಶ್ರೀ ಶೋಭಾ ಕರಂದ್ಲಾಜೆ (ಇಂಧನ ಸಚಿವರು) :

ಅ) ರಾಜ್ಯದಲ್ಲಿ ವಿದ್ಯುತ್ ಸರಬರಾಜು ಕಂಪನಿಗಳು ಸ್ವಲ್ಪಮಟ್ಟಿನ ವಿದ್ಯುತ್ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಕೊರತೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಕೊರತೆಯನ್ನು ನೀಗಿಸಲು ಈ ಕೆಳಕಂಡ ಕ್ರಮಗಳನ್ನು ಸರ್ಕಾರವು ಕೈಗೊಳ್ಳುತ್ತಿದೆ.

ಅ) ವಿವಿಧ ಕಾರಣಗಳಿಂದ ವಿಫಲಗೊಳ್ಳುವ ವಿತರಣಾ ಟ್ರಾನ್ಸ್ ಫಾರ್ಮರ್‌ಗಳನ್ನು ಶೀಘ್ರಗತಿಯಲ್ಲಿ ಬದಲಾಯಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಅಲ್ಲದೇ, ವಿಫಲವಾಗುವ ವಿರತಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಶೀಘ್ರ ಗತಿಯಲ್ಲಿ ದುರಸ್ತಿಗೊಳಿಸಿ ವಿತಾರಣಾ ಟ್ರಾನ್ಸ್‌ಫಾರ್ಮರ್‌ಗಳ ಲಭ್ಯತೆಯನ್ನು ಹೆಚ್ಚಿಸಲು ರಾಜ್ಯಾದ್ಯಂತ ಒಟ್ಟು 60 ಟ್ರಾನ್ಸ್‌ಫಾರ್ಮರ್ ದುರಸ್ತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಪ್ರಸಕ್ತ ಸಾಲಿನಲ್ಲಿ (2011–12) ಜನವರಿ 2012ರ ಅಂತ್ಯದವರೆಗೆ ಈ ಟ್ರಾನ್ಸ್ ಫಾರ್ಮರ್ ದುರಸ್ತಿ ಕೇಂದ್ರಗಳಿಂದ ಒಟ್ಟು 32,977 ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ದುರಸ್ತಿಗೊಳಿಸಲಾಗಿರುತ್ತದೆ.

ಆ) ದುರಸ್ತಿಗೊಂಡ ಪರಿವರ್ತಕಗಳ ಗುಣಮಟ್ಟವನ್ನು ಕಾಪಾಡಲು ದುರಸ್ತಿಯ ಪ್ರತಿ ಹಂತದಲ್ಲಿ ಪರೀಕ್ಷಿಸಲು ಕ್ರಮ ಕೈಗೊಳ್ಳಲಾಗಿದೆ. ಶೀಘ್ರವಾಗಿ ಪರಿವರ್ತಕಗಳನ್ನು ದುರಸ್ತಿ ಮಾಡಿ ಅವುಗಳನ್ನು ಶೀಘ್ರವಾಗಿ ಬದಲಾಯಿಸುವ ಸಂಬಂಧ ವಿಭಾಗೀಯ ಮಟ್ಟದಲ್ಲಿ ದುರಸ್ತಿಗೆ ಅವಾರ್ಡ್ ಮಾಡಲು ಕ್ರಮ ಕೈಗೊಳ್ಳಲಾಗಿದೆ.

(ಇ) ಪರಿವರ್ತಕಗಳ ಕೊರತೆಯನ್ನು ನೀಗಿಸಲು ಖರೀದಿಯನ್ನು ಚುರುಕುಗೊಳಿಸಲಾಗಿದ್ದು, ಏಪ್ರಿಲ್ 2011 ರಿಂದ ಜನವರಿ 2012ರ ಅಂತ್ಯದವರೆಗೆ ಒಟ್ಟು 15,642 ಪರಿವರ್ತಕಗಳನ್ನು ಖರೀದಿಸಲಾಗಿದೆ.

(ಈ) ಅಕ್ರಮ ನೀರಾವರಿ ಪಂಪುಸೆಟ್ಟುಗಳನ್ನು ಸಕ್ರಮಗೊಳಿಸಿ ಅವುಗಳಿಗೆ ಮೂಲಭೂತ ಸೌಕರ್ಯ ನೀಡಿ ಈ ಯೋಜನೆಯಡಿ 3 ರಿಂದ 5 ಪಂಪುಸೆಟ್ಟುಗಳಿಗೆ ಒಂದು 25 ಕೆ.ವಿ.ಯ ಪರಿವರ್ತಕವನ್ನು ಸ್ಥಾಪಿಸಿ ಪರಿವರ್ತಕದ ವಿಫಲತೆಯನ್ನು ನೀಗಿಸಲು ಕ್ರಮ ಕೈಗೊಳ್ಳಲಾಗುವುದು.

ಉ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ "ನಿರಂತರ ಜ್ಯೋತಿ" ಎಂಬ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಯಡಿ ಕೃಷಿ ಮತ್ತು ಕೃಷಿಯೇತರ ಸ್ಥಾನವರ ಗಳಿಗೆ ಪ್ರತ್ಯೇಕ ಫೀಡರ್‌ಗಳನ್ನು ಹಾಗೂ ಹೆಚ್ಚುರಿ ವಿತರಣಾ ಟ್ರಾನ್ಸ್ ಫಾರ್ಮರ್‌ಗಳನ್ನು ಅಳವಡಿಸುವುದರಿಂದ, ಗ್ರಾಮಾಂತರ ಪ್ರದೇಶಗಳಲ್ಲಿ ಹಾಲಿ ಇರುವ ಫೀಡರ್‌ಗಳಲ್ಲಿನ ವಿದ್ಯುತ್ ಹೊರೆಯು ಕಡಿಮೆಗೊಳ್ಳುತ್ತದೆ. ಇದರಿಂದ, ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ವಿಫಲತೆಯು ಕಡಿಮೆ ಗೊಂಡು, ಕೊರತೆಯನ್ನು ನೀಗಿಸಬಹುದಾಗಿದೆ. ಅಲ್ಲದೇ, ಈ ಯೋಜನೆಯಿಂದ ಕೆಪಾಸಿಟರ್ ಮೂಲಕ ನೀರಾವರಿ ಪಂಪುಸೆಟ್ಟುಗಳನ್ನು ಚಾಲನೆಗೊಳಿಸುವುದನ್ನು ತಡೆಗಟ್ಟಬಹುದಾಗಿದೆ.

(ಊ) ತಾಂತ್ರಿಕ ದೋಷಗಳಿಂದ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳು ವಿಫಲವಾಗುವುದನ್ನು ಕಡಿಮೆ ಮಾಡಲು ವಿತರರಣಾ ಟ್ರಾನ್ಸ್‌ಫಾರ್ಮರ್ ಕೇಂದ್ರಗಳಲ್ಲಿ ಹಾಗೂ ವಿದ್ಯುತ್ ಮಾರ್ಗಗಳಲ್ಲಿ ಅವಶ್ಯವಿರುವ ಎಲ್ಲಾ ನಿರ್ವಹಣಾ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.

ಕಳೆದ ಮೂರು ವರ್ಷಗಳಲ್ಲಿ ಚಿಕ್ಕನಾಯಕನಹಳ್ಳಿ ತಾಲ್ಲೂಕಿಗೆ ಟಿ.ಸಿ.ಎಸ್. ಒದಗಿಸುವುದು

49 (64) ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ತಿಪಟೂರು ಬೆಸ್ಕಾಂ ವಿಭಾಗೀಯ ಕಛೇರಿಗೆ ಕಳೆದ ಮೂರು ವರ್ಷಗಳಲ್ಲಿ ಒದಗಿಸಲಾಗಿರುವ ಟಿ.ಸಿ.ಗಳೆಷ್ಟು;

ಆ) ವಾರ್ಷಿಕವಾರು 100 ಕೆ.ವಿ.ಎ, 63 ಕೆ.ವಿ.ಎ, ಮತ್ತು 25 ಕೆ.ವಿ.ಎ, ಟಿ.ಸಿ.ಗಳ ಸಂಖ್ಯೆ ಎಷ್ಟು;